ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಶುಕ್ರವಾರ, ದಿನಾಂಕ : 20 ನೇ ಮಾರ್ಚ್, 2020

ಕೊಡಗು ಜಿಲ್ಲೆಯಲ್ಲಿ ಕಳೆದೆರಡು ವರ್ಷ ಸಂಭವಿಸಿದ ಪ್ರಕೃತಿ ವಿಕೋಪದ ನಂತರದಲ್ಲಿ ಬಸ್ ಸಂಚಾರ ವ್ಯವಸ್ಥೆ ಕಲ್ಪಿಸುವ ಕುರಿತು

ಶ್ರೀಮತಿ ಎಸ್. ವೀಣಾ ಅಚ್ಚಯ್ಯ(ವಿಧಾನಸಭೆಯಿಂದ ಚುನಾಯಿತರಾದವರು):-

1380 (1636) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕೊಡಗು ಜಿಲ್ಲೆಯಲ್ಲಿ ಕಳೆದ ಎರಡು ವರ್ಷಗಳಲ್ಲಿ ಸಂಭವಿಸಿದ ಪ್ರಕೃತಿ ವಿಕೋಪದ ಮೊದಲು ಇದ್ದ ಎಲ್ಲಾ ಮಾರ್ಗಗಳಲ್ಲಿ ಬಸ್ ಸಂಚಾರ ವ್ಯವಸ್ಥೆ ಪುನರ್ ಸ್ಥಾಪಿಸಲಾಗಿದೆಯೇ ;

(ಆ) 2 ಬಾರಿ ಸಂಭವಿಸಿದ ಪ್ರಕೃತಿ ವಿಕೋಪದ ನಂತರದಲ್ಲಿ ಯಾವುದಾದರೂ ಮಾರ್ಗದ ಸೇವೆಯನ್ನು ರದ್ದುಗೊಳಿಸಿರುವ ಅಥವಾ ಕಡಿತಗೊಳಿಸಿರುವ ಪ್ರಕರಣಗಳಿವೆಯೇ ;

(ಇ) ಜಿಲ್ಲೆಯಲ್ಲಿ ಇನ್ನೂ ಬಸ್ ಸಂಚಾರ ಸೌಲಭ್ಯದಿಂದ ವಂಚಿತವಾಗಿರುವ ಗ್ರಾಮಗಳಿವೆಯೇ ; ಇದ್ದಲ್ಲಿ, ಪಟ್ಟಿ ನೀಡುವುದು ಹಾಗೂ ಈ ಗ್ರಾಮಗಳಿಗೆ ಇದುವರೆವಿಗೂ ಸೌಲಭ್ಯ ಕಲ್ಪಿಸದೇ ಇರಲು ಕಾರಣಗಳೇನು ?